ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೊಂದನೆಯ ಅಧಿವೇಶನ

ಮಂಗಳವಾರ, ದಿನಾಂಕ: 22ನೇ ಸೆಪ್ಟಂಬರ್, 2020

ರಾಜ್ಯದಲ್ಲಿರುವ ನ್ಯಾಯಬೆಲೆ ಅಂಗಡಿಗಳಲ್ಲಿ ಅಕ್ರಮ ನಡೆಯುತ್ತಿರುವ ಕುರಿತು

ಶ್ರೀ ಎಂ.ನಾರಾಯಣಸ್ವಾಮಿ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) :-

201 (274) ಮಾನ್ಯ ಆಹಾರ ಮತ್ತು ನಾಗರಿಕ ಸರಬರಾಜು ಹಾಗೂ ಗ್ರಾಹಕರ ವ್ಯವಹಾರಗಳ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ರಾಜ್ಯದಲ್ಲಿ ಇಲ್ಲಿಯವರೆಗೆ ಹಂಚಿಕೆಯಾಗರುವ BPL ಮತ್ತು APL ಪಡಿತರ ಚೀಟಿಗಳ ಸಂಖ್ಯೆ ಎಷ್ಟು ;

(ಆ) ಇಲ್ಲಿಯವರೆಗೆ ಹೊಸದಾಗಿ ಸಲ್ಲಿಕೆಯಾದ ಅರ್ಜಿಗಳು ಎಷ್ಟು; ಹಾಗೂ ವಿತರಿಸಿದ ಪಡಿತರಗಳು ಎಷ್ಟು;

(ಇ) ನ್ಯಾಯಬೆಲೆ ಅಂಗಡಿಗಳು ಸಮರ್ಪಕವಾಗಿ ದಿನಸಿ ವಿತರಣೆ ಮಾಡದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಸರ್ಕಾರ ಇದರ ಬಗ್ಗೆ ಕೈಗೊಂಡ ಕ್ರಮಗಳೇನು;

(ಈ) ನ್ಯಾಯಬೆಲೆ ಅಂಗಡಿಗಳಲ್ಲಿ ಸರ್ಕಾರ ನೀಡುವ ದಿನಸಿ ವಸ್ತುಗಳನ್ನು ಹೊರತುಪಡಿಸಿ ಬೇರೆ ವಸ್ತುಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಉ) ಇತರೆ ವಸ್ತುಗಳನ್ನು ಖರೀದಿ ಮಾಡಿದರೆ ಮಾತ್ರ ದಿನಸಿ ನೀಡಲಾಗುವುದು ಎಂದು ನ್ಯಾಯಬೆಲೆ ಅಂಗಡಿಯವರು ಒತ್ತಾಯ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ಕೈಗೊಂಡ ಕ್ರಮಗಳೇನು?